ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ. DTE-ADMI0ACM2/96/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:18-09-2021.

**-:: ಸು ತ್ತೋಲೆ ::-**

**ವಿಷಯ:** 2021-22ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ **ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.**

**ಉಲ್ಲೇಖ:** ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

-oooooo-

2021-22ನೇ ಸಾಲಿನ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರಥಮ ಸೆಮಿಸ್ಟರ್, ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆಯಲು ದಿ:20-09-2021ರ ಒಳಗೆ ಪ್ರವೇಶ ಪಡೆಯಲು ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿತ್ತು.

ಪ್ರವೇಶಾವಧಿಯನ್ನು ವಿಸ್ತರಿಸಲು ಸಂಬಂಧಪಟ್ಟ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಮನವಿ ಕೋರಿರುವುದನ್ನು ಪರಿಶೀಲಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ)ನಲ್ಲಿ ಉಳಿಕೆಯಾಗಿರುವ ಸೀಟುಗಳಿಗೆ ನಿಯಮಗಳ ಪ್ರಕಾರ **ದಿ:30-09-2021 ರ ಒಳಗೆ ಪ್ರವೇಶಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಪ್ರವೇಶಾವಧಿಯನ್ನು ವಿಸ್ತರಿಸಿ** ಅನುಮತಿ ನೀಡಲಾಗಿದೆ.

ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು **ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.** ***ಕೋವಿಡ್-19 ಹಿನ್ನಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.***

ಆಯುಕ್ತರು

***ರಾಜ್ಯದ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ*** - ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ **ದಿ:30-09-2021ರ** ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

**ಪ್ರತಿ ಮಾಹಿತಿಗಾಗಿ:-**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ) ಇವರ ಆಪ್ತಶಾಖೆಗೆ.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಇ.ಆರ್.ಎಸ್ ವಿಭಾಗಕ್ಕೆ - ಅರ್ಹತಾ ಪ್ರಮಾಣ ಪತ್ರ ವಿತರಿಸಲು ಅಗತ್ಯ ಕ್ರಮಕ್ಕಾಗಿ.
7. ಕಛೇರಿ ಪ್ರತಿ.

Scanned with CamScanner